**ಓ.ಎಸ್. ನಂ. 43/2023** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 2.8.2024 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ದಿನಾಂಕ 11.4.2022 ರ ನೋಂದಾಯಿತ ಕ್ರಯದ ಕರಾರುಪತ್ರವನ್ನು ನಿಪಿ1 ಎಂದು ಗುರುತಿಸಲಾಯಿತು. ಸದರಿ ದಾಖಲೆಯನ್ನು 1 ಮತ್ತು 2 ನೇ ಪ್ರತಿವಾದಿಯರು ನನಗೆ ಬರೆದುಕೊಟ್ಟಿರುತ್ತಾರೆ. ಸಾಕ್ಷಿದಾರರು ಪ್ರತಿವಾದಿಯರ ಪ್ರತಿ ಪುಟದಲ್ಲಿರುವ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ1 ಎ ಮತ್ತು ನಿಪಿ1 ಬಿ ಎಂದು ಗುರುತಿಸಲಾಯಿತು. ಸಾಕ್ಷಿದಾರರು ನಿಪಿ1 ರ ಪ್ರತಿ ಪುಟದಲ್ಲಿರುವ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ1 ಸಿ ಎಂದು ಗುರುತಿಸಲಾಯಿತು. ಇ.ಸಿ ಯನ್ನು ನಿಪಿ2 ಎಂದು, ಪಟ್ಟಾ ಪುಸ್ತಕವನ್ನು ನಿಪಿ3 ಎಂದು, ತೆರಿಗೆ ಪಾವತಿ ರಶೀದಿಯನ್ನು ನಿಪಿ4 ಎಂದು, ದಿನಾಂಕ 17.2.2023 ರಂದು ಪ್ರತಿವಾದಿಯರಿಗೆ ವಕೀಲರ ಮೂಲಕ ನೀಡಿದ ನೋಟಿಸಿನ ಕಛೇರಿ ಪ್ರತಿಯನ್ನು ನಿಪಿ5 ಎಂದು, ಎರಡು ಅಂಚೆ ರಶೀದಿಗಳನ್ನು ನಿಪಿ6 ಮತ್ತು ನಿಪಿ7 ಎಂದು, ಎರಡು ಅಂಚೆ ಸ್ವೀಕೃತಿಗಳನ್ನು ನಿಪಿ8 ಮತ್ತು ನಿಪಿ9 ಎಂದು, ನನಗೆ ಸಂಬಂಧಿಸಿದ ಎಸ್.ಬಿ.ಐ, ಮಾನಸ ಗಂಗೋತ್ರಿ ಶಾಖೆಯ ಬ್ಯಾಂಕ್ ಸ್ಟೇಟಮೆಂಟನ್ನು ನಿಪಿ10 ಎಂದು, ಪ್ರತಿವಾದಿಯರು ವಕೀಲರ ಮೂಲಕ ನೀಡಿರುವ ಉತ್ತರವನ್ನು ನಿಪಿ11 ಎಂದು, ದಿನಾಂಕ 9.6.2022 ರಂದು ಆಂದೋಲನ ದಿನಪತ್ರಿಕೆಯನ್ನು ಹಾಜರುಪಡಿಸಿದ್ದು ನಿಪಿ12 ಎಂದು, ಅದರಲ್ಲಿರುವ ಈ ದಾವೆಗೆ ಸಂಬಂಧಿಸಿದ ಪ್ರಕಟಣೆ ಭಾಗವನ್ನು ನಿಪಿ12 ಎ ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಓ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.